## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- RIDF ಅಡಿ ಸೂಕ್ಷ್ಮ ನೀರಾವರಿ ಕಾರ್ಯಕ್ರಮದ ಅನುಷ್ಠಾನಕ್ಕಾಗಿ ಎರಡನೇ ತ್ರೈಮಾಸಿಕ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:- 1. ಸರ್ಕಾರದ ಆದೇಶ ಸಂಖ್ಯೆ: ಕೃಇ 41 ಕೃಯೋಕಾ 2018 ದಿ: 02-04-2019.

2. ಸರ್ಕಾರದ ಆದೇಶ ಸಂಖ್ಯೆ: AGRI-ACT/16/2019, ದಿನಾಂಕ: 30-05-2019

3. ಕೃಷಿ ಆಯುಕ್ತರವರ ಪ್ರಸ್ತಾವನೆ ಸಂಖ್ಯೆ: ಉಕೃನಿ/ಕೃಯಾಂ&ಸೂನೀ/ಸೂನೀ/RIDF/2019-20 ದಿನಾಂಕ: 13-08-2019.

**ಪ್ರಸ್ತಾವನೆ:**

ಮೇಲೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ, ಕೃಷಿ ಮತ್ತು ಜಲಾನಯನ ಅಭಿವೃದ್ಧಿ ಇಲಾಖೆಯಲ್ಲಿ 2018-19ನೇ ಸಾಲಿನಲ್ಲಿ ಚಾಲ್ತಿಯಲ್ಲಿದ್ದ ಯೋಜನೆಗಳನ್ನು 2019-20ನೇ ಸಾಲಿನಲ್ಲಿ ಮುಂದುವರೆಸಿ ಆದೇಶಿಸಿದೆ.

ಮೇಲೆ (2)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ, 2019-20ನೇ ಸಾಲಿನಲ್ಲಿ "Installation of Micro Irrigation Systems" RIDF-21 & 22 Tranche ಅಡಿಯಲ್ಲಿ ಅನುಮೋದನೆಯಾಗಿರುವ ಕಾರ್ಯಕ್ರಮದ ಅನುಷ್ಠಾನಕ್ಕಾಗಿ ಲೆಕ್ಕ ಶೀರ್ಷಿಕೆ: 2401-00-108-1-15 ಉಪ ಶೀರ್ಷಿಕೆ-436 ರಡಿಯಲ್ಲಿ ಒದಗಿಸಲಾದ ರೂ.3218.00 ಲಕ್ಷಗಳ ಅನುದಾನದಲ್ಲಿ ಮೊದಲನೇ ಕಂತಿನ ಅನುದಾನ ಶೇ. 25 ಅಂದರೆ ರೂ.804.50 ಲಕ್ಷಗಳನ್ನು (ಎಂಟು ನೂರ ನಾಲ್ಕು ಲಕ್ಷ ಮತ್ತು ಐವತ್ತು ಸಾವಿರ ರೂಪಾಯಿಗಳು ಮಾತ್ರ) ಅನುದಾನದಲ್ಲಿ ಲಭ್ಯತೆಯನ್ನಾಧರಿಸಿ ಬಿಡುಗಡೆ ಮಾಡಿ ಆದೇಶಿಸಿದೆ.

ಮೇಲೆ (3)ರಲ್ಲಿ ಓದಲಾದ ಕೃಷಿ ಆಯುಕ್ತರವರ ಪ್ರಸ್ತಾವನೆಯಲ್ಲಿ 2019-20ನೇ ಸಾಲಿನ ಆಯವ್ಯಯದಲ್ಲಿ NMSA –ಮುಖ್ಯಮಂತ್ರಿಗಳ ಸೂಕ್ಷ್ಮ ನೀರಾವರಿ ಯೋಜನ ಲೆ.ಶೀ:2401-00-108-1-15 ಉಪ ಶೀರ್ಷಿಕೆ-436 ಗೆ ನಬಾರ್ಡ್ ಕಾಮಗಾರಿಗಳಿಗೆ ರೂ. 3218.00 ಲಕ್ಷಗಳಅನುದಾನವನ್ನು ಒದಗಿಸಲಾಗಿದ್ದು, ಇದರಲ್ಲಿ ಮೊದಲನೇ ಕಂತಿನಲ್ಲಿ ರೂ.804.50 ಲಕ್ಷ ಅನುದಾನವನ್ನು ಬಿಡುಗಡೆ ಮಾಡಲಾಗಿದ್ದು, ಜುಲೈ 2019ರ ಮಾಹೆಯಅಂತ್ಯಕ್ಕೆ ರೂ.644.91 ಲಕ್ಷ (ಶೇ.80ರಷ್ಟು) ಅನುದಾನ ವೆಚ್ಚವಾಗಿರುತ್ತದೆ. ಈ ಸಂಬಂಧ ಕ್ಲೇಮುಗಳನ್ನು ನಬಾರ್ಡ್ ಸಂಸ್ಥೆಗೆ ಸಲ್ಲಿಸಲಾಗಿರುತ್ತದೆ. ಕ್ಷೇತ್ರ ಮಟ್ಟದಲ್ಲಿ ಸೂಕ್ಷ್ಮ ನೀರಾವರಿ ಘಟಕಗಳಿಗೆ ಹೆಚ್ಚಿನ ಬೇಡಿಕೆ ಇರುವುದರ ಪ್ರಯುಕ್ತ 2ನೇ ಕಂತಿನ ಅನುದಾನವನ್ನು ಬಿಡುಗಡೆಗೊಳಿಸಿ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

...2

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: AGRI-ACT/16/2019, ಬೆಂಗಳೂರು, ದಿನಾಂಕ:29.08.2019.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, 2019-20ನೇ ಸಾಲಿನಲ್ಲಿ "Installation of Micro Irrigation Systems" RIDF-21 & 22 Tranche ಅಡಿಯಲ್ಲಿ ಅನುಮೋದನೆಯಾಗಿರುವ ಕಾರ್ಯಕ್ರಮದ ಅನುಷ್ಠಾನಕ್ಕಾಗಿ ಲೆಕ್ಕ ಶೀರ್ಷಿಕೆ: 2401-00-108-1-15 ಉಪ ಶೀರ್ಷಿಕೆ-436 ರಡಿಯಲ್ಲಿ ಒದಗಿಸಲಾದ ರೂ.3218.00 ಲಕ್ಷಗಳ ಅನುದಾನದಲ್ಲಿ ಎರಡನೇ ಕಂತಿನ ಅನುದಾನ ಶೇ. 25% ಅಂದರೆ ರೂ.804.50 ಲಕ್ಷಗಳನ್ನು (ಎಂಟು ನೂರ ನಾಲ್ಕು ಲಕ್ಷ ಮತ್ತು ಐವತ್ತು ಸಾವಿರ ರೂಪಾಯಿಗಳು ಮಾತ್ರ) ಬಿಡುಗಡೆ ಮಾಡಿ ಆದೇಶಿಸಿದೆ.

ಕೃಷಿ ಆಯುಕ್ತರು ಮೇಲ್ಕಂಡ ಯೋಜನೆಯಡಿಯಲ್ಲಿ ಆದ ವೆಚ್ಚಕ್ಕೆ ಮರುಪಾವತಿ ಕ್ಲೇಮುಗಳನ್ನು ಕೂಡಲೇ ನಬಾರ್ಡ್ ಸಂಸ್ಥೆಗೆ ಸಲ್ಲಿಸತಕ್ಕದ್ದು ಹಾಗೂ ಆರ್ಥಿಕ ಇಲಾಖೆ (ಆನಿ ಮತ್ತು ಬಿಸಿಸಿ) ರವರ ಸುತ್ತೋಲೆ ಸಂಖ್ಯೆ: ಆಇ 1 ಟಿಎಫ್ ಪಿ 2019, ದಿನಾಂಕ:20.08.2019ರ ಪ್ರಕಾರ ಈ ಕೆಳಕಂಡ ಅಂಶಗಳಂತೆ ಮುಂದಿನ ತ್ರೈಮಾಸಿಕ ಅನುದಾನ ಬಿಡುಗಡೆಗೆ ಪ್ರಸ್ತಾವನೆಯನ್ನು ಸಲ್ಲಿಸತಕ್ಕದ್ದು.

- ಪಿ.ಡಿ/ಬ್ಯಾಂಕ್ ಖಾತೆಯಲ್ಲಿ 1ನೇ ಏಪ್ರಿಲ್ ನ ಅಂತ್ಯಕ್ಕೆ ಆರಂಭಿಕ ಶಿಲ್ಕು ಹಾಗೂ ಆರಂಭಿಕ ಶಿಲ್ಕಿನ ಬಿಡುಗಡೆ ಆದೇಶದ ದಿನಾಂಕದವರೆಗೆ ಆಗಿರುವ ವೆಚ್ಚ
- ಆರ್ಥಿಕ ವರ್ಷದಲ್ಲಿ ಹಿಂದಿನ ಕಂತುಗಳಲ್ಲಿ ಮಾಡಿದ ಬಿಡುಗಡೆಗಳು
- ಆರಂಭಿಕ ಶಿಲ್ಕು ಮತ್ತು ಹಿಂದಿನ ಬಿಡುಗಡೆಗಳು ಸೇರಿ ಲಭ್ಯವಿರುವ ಒಟ್ಟು ಮೊತ್ತ
- ಆಗಿರುವ ವೆಚ್ಚ
- ಲಭ್ಯವಿರುವ ಒಟ್ಟು ಮೊತ್ತಕ್ಕೆ ಆಗಿರುವ ಶೇಕಡಾವಾರು ವೆಚ್ಚ

ಈ ಆದೇಶವನ್ನುಆಂತರಿಕ ಆರ್ಥಿಕ ಸಲಹೆಗಾರರವರ ಟಿಪ್ಪಣಿ ಸಂಖ್ಯೆ: ಕೃಇ 32 ಆಂಆಸ 2019, ದಿನಾಂಕ:23.08.2019ರಂದು ನೀಡಿರುವ ಸಹಮತಿ ಮತ್ತು ಸರ್ಕಾರದ ಆದೇಶ ಸಂಖ್ಯೆ: ಎಫ್ ಡಿ 1 ಟಿಎಫ್ ಪಿ 2019 ದಿನಾಂಕ:04.07.2019ರಲ್ಲಿ ಸರ್ಕಾರದ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

B S Nagarathnam

(ಬಿ.ಎಸ್. ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ (ಯೋಜನೆ)

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01

2. ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01
3. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ತೋಟಗಾರಿಕೆ ಇಲಾಖೆ.
5. ಆಯುಕ್ತರು/ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
6. ಆಯುಕ್ತರು/ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು.
7. ಪ್ರಧಾನ ವ್ಯವಸ್ಥಾಪಕರು, ನಬಾರ್ಡ್, ನಂ.46, ಕೆಂಪೇಗೌಡ ರಸ್ತೆ, ಬೆಂಗಳೂರು-09.
8. ಉಪ ಪ್ರಧಾನ ವ್ಯವಸ್ಥಾಪಕರು, ನಬಾರ್ಡ್, ನಂ.46, ಕೆಂಪೇಗೌಡ ರಸ್ತೆ, ಬೆಂಗಳೂರು-09.
9. ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಸಾಂಸ್ಥಿಕ ಹಣಕಾಸು), ಬೆಂಗಳೂರು.
10. ಸರ್ಕಾರದ ಉಪ ಕಾರ್ಯದರ್ಶಿ-1, ಆರ್ಥಿಕ ಇಲಾಖೆ, ಬೆಂಗಳೂರು
11. ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಇಲಾಖೆ, ಕೃಷಿ ಇಲಾಖೆ.
12. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
13. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
14. ಉಪ ನಿರ್ದೇಶಕರು, TNMC, ಖನಿಜ ಭವನ, ಬೆಂಗಳೂರು.
15. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ-4), ಬೆಂಗಳೂರು.
16. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
17. ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ, ಬೆಂಗಳೂರು.
18. ಸರ್ಕಾರದ ಉಪ ಕಾರ್ಯದರ್ಶಿ-1 & 2 ರವರ ಆಪ್ತ ಸಹಾಯಕರು, ಕೃಷಿ ಇಲಾಖೆ.
19. ಶಾಖೆಯ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.